ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಅರಣ್ಯ ಇಲಾಖೆ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

226 (398) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಕೆಲವೆಡೆ ಅರಣ್ಯ ವ್ಯಾಪ್ತಿಯಲ್ಲಿ ವಾಸಿಸುವ ನಿವಾಸಿಗಳು ತಮ್ಮ ಸ್ವಾರ್ಥಕ್ಕಾಗಿ, ವೈಯುಕ್ತಿಕ ದ್ವೇಷ, ಜಾಗದ ವೈಷಮ್ಯಕ್ಕಾಗಿ ಬೆಂಕಿ ಹಚ್ಚುತ್ತಿರುವ ಕೆಲವು ಘಟನೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಕೆಲವು ಅಗ್ನಿಶಾಮಕ ಠಾಣೆಗಳಲ್ಲಿ ಸಿಬ್ಬಂದಿ ಕೊರತೆಯನ್ನು ಎದುರಿಸುತ್ತಿದ್ದು, ಇದನ್ನು ಸರಿದೂಗಿಸಲು ಕೆಲವೆಡೆ ಹೋಮ್ ಗಾರ್ಡ್‌ಗಳನ್ನು ನಿಯೋಜಿಸಲಾಗಿದೆಯೇ; ಈ ಹೋಮ್ ಗಾರ್ಡ್ ಸಿಬ್ಬಂದಿಗಳು ಅರಣ್ಯದಲ್ಲಿ ಬೆಂಕಿ ನಂದಿಸುವ ಪರಿಣಿತಿ ತರಬೇತಿಯನ್ನು ಹೊಂದಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸಿಬ್ಬಂದಿ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಕಳೆದ ಫೆಬ್ರವರಿಯಲ್ಲಿ ಬಂಡೀಪುರ ಹುಲಿ ಸಂರಕ್ಷಿತಾರಣ್ಯದಲ್ಲಿ ಬೆಂಕಿ ಕಾಣಿಸಿಕೊಂಡು ಕಾಡ್ಗಿಚ್ಚಿನಂತೆ ಹರಡಿ ಸುಮಾರು 20000 ಕ್ಕೂ ಹೆಚ್ಚು ಎಕರೆ ಅರಣ್ಯ ಪ್ರದೇಶ ಬೆಂಕಿಗಾಹುತಿಯಾಗಿದ್ದು, ಈ ದುರಂತಗಳನ್ನು ತಪ್ಪಿಸಲು ಅರಣ್ಯ ಇಲಾಖೆಯ ಸಿಬ್ಬಂದಿಯ ಸಾಂಪ್ರದಾಯಿಕ ಬೆಂಕಿ ನಂದಿಸುವ ವಿಧಾನದಿಂದ ಹೊಸ ವೈಜ್ಞಾನಿಕ ವಿಧಾನಗಳನ್ನು ಅಳವಡಿಸಿಕೊಳ್ಳಲು ಸರ್ಕಾರವು ಚಿಂತಿಸಿದೆಯೇ; ಹಾಗಿದ್ದಲ್ಲಿ, ಯಾವ ಯಾವ ಯೋಜನೆಗಳನ್ನು ರೂಪಿಸುತ್ತಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಟಿಂಬರ್ ಮಾಫಿಯಾದವರು ರಾತ್ರಿ ಹೊತ್ತು ಚೆಕ್ ಪೋಸ್ಟ್‌ನಲ್ಲಿರುವ ಪೊಲೀಸರಿಗೆ ಮತ್ತು ಅರಣ್ಯ ಅಧಿಕಾರಿಗಳು ಮತ್ತು ಅರಣ್ಯ ಸಿಬ್ಬಂದಿ ಅಕ್ರಮಗಳಿಗೆ ಕೈ ಜೋಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಟಿಂಬರ್ ಮಾಫಿಯಾವನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?